# ಮೌಲಾನ ಆಜ಼ಾದ್ ಮಾದರಿ ಶಾಲೆ (ಆಂಗ್ಲ ಮಾಧ್ಯಮ). ಶಿಡ್ಲಘಟ್ಟ ಟೌನ್ ಶಿಡ್ಲಘಟ್ಟ ತಾಲ್ಲೂಕು, ಚಿಕ್ಕಬಳ್ಳಾಪುರ ಜಿಲ್ಲೆ –562105

| | |
|---|---|
| ಪ್ರಾರಂಭವಾದ ವರ್ಷ ಮತ್ತು ದಿನಾಂಕ | ವರ್ಷ–2018–2019<br>ದಿನಾಂಕ–01.06.2018 |
| ಸರ್ಕಾರಿ ಆದೇಶ ಸಂಖ್ಯೆ | ಎಂಡಬ್ಲ್ಯೂಡಿ 204 ಎಂಡಿಎಸ್ 2017 |
| ಕಟ್ಟಡದ ವಿಸ್ತೀರ್ಣ | 148 ಅಡಿ ಉದ್ದ 134 ಅಡಿ ಅಗಲ |
| ಅಕ್ಷಾಂಶ & ರೇಖಾಂಶ | Lat N 13 24’ 16.7616”<br>Long E 77 51’56.1024” |
| ಮಂಜೂರಾತಿಯಾದ ವಿದ್ಯಾರ್ಥಿಗಳ ಸಂಖ್ಯೆ | 300 |
| ಪ್ರಸ್ತುತ ಅಧ್ಯಯನ ಮಾಡುತ್ತಿರುವ ವಿದ್ಯಾರ್ಥಿಗಳ ಸಂಖ್ಯೆ | 162 |
| ತರಗತಿ | 6ನೇ ತರಗತಿಯಿಂದ 10ನೇ ತರಗತಿ |
| ಮಾಧ್ಯಮ | |



## :: ವಿವರಣೆ ::

ಚಿಕ್ಕಬಳ್ಳಾಪುರ ಜಿಲ್ಲೆಯ ಶಿಡ್ಲಘಟ್ಟ ತಾಲ್ಲೂಕಿನ ಮೌಲಾನ ಆಂಗ್ಲ ಮಾಧ್ಯಮ ಮಾದರಿ ಶಾಲೆಯು 2018–19ನೇ ಸಾಲಿನಲ್ಲಿ ಶಿಕ್ಷಣ ಇಲಾಖೆಯ ಬಾಡಿಗೆ ಕಟ್ಟಡದಲ್ಲಿ 52 ವಿದ್ಯಾರ್ಥಿಗಳಿಂದ ಪ್ರಾರಂಭಿಸಲಾಯಿತು. ಪ್ರಸ್ತುತ 162 ವಿದ್ಯಾರ್ಥಿಗಳು ವ್ಯಾಸಂಗ ಮಾಡುತ್ತಿದ್ದಾರೆ. ಈ ಶಾಲೆಯಲ್ಲಿ 6ನೇ ತರಗತಿಯಿಂದ 10ನೇ ತರಗತಿಯವರೆಗೂ ವಿದ್ಯಾಭ್ಯಾಸ ಮಾಡಲು ಅವಕಾಶವಿರುತ್ತದೆ. ಸರ್ಕಾರದ ಆದೇಶದಂತೆ ಪ್ರತಿ ವರ್ಗಕ್ಕೆ 60 ಸಂಖ್ಯಾಬಲ ಇರುತ್ತದೆ. ಹಾಗೂ ಅಲ್ಪಸಂಖ್ಯಾತರ ವಿದ್ಯಾರ್ಥಿಗಳಿಗೆ ಶೇಕಡಾ 75 ರಷ್ಟು ಮತ್ತು ಇತರೆ ವರ್ಗದ ವಿದ್ಯಾರ್ಥಿಗಳಿಗೆ ಶೇಕಡಾ 25 ರಷ್ಟು ಪ್ರವೇಶಕ್ಕೆ ಅವಕಾಶ ಇರುತ್ತದೆ.

ಈ ಶಾಲೆಯ ವಿದ್ಯಾರ್ಥಿಗಳಿಗೆ ಜ್ಞಾನವನ್ನು ಹೆಚ್ಚಿಸಲು ಲೈಬ್ರರಿ ಕೊಠಡಿಗಳು ಹಾಗೂ ಉಚಿತ ನೋಟ್ ಪುಸ್ತಕ, ಸಮವಸ್ತ್ರ, ಶೂ, ಸ್ಟೇಷನರಿ ಸಾಮಾಗ್ರಿಗಳನ್ನು ಒದಗಿಸಲಾಗಿದೆ. ಮಧ್ಯಾಹ್ನದ ಬಿಸಿ ಊಟ, ಶುದ್ಧ ಕುಡಿಯುವ ನೀರಿನ ವ್ಯವಸ್ಥೆ ಹಾಗೂ ಅನುಭವ ಶಿಕ್ಷಕರಿಂದ ಉತ್ತಮ ಭೋಧನೆ ಮಾಡಲಾಗಿದೆ. ಕೇವಲ ಶೈಕ್ಷಣಿಕ ಚಟುವಟುಕೆಗಳಲ್ಲದೆ ಪಠ್ಯೇತರ ಚಟುವಟಿಕೆಗಳಲ್ಲಿಯೇ ಎಲ್ಲಾ ವಿದ್ಯಾರ್ಥಿಗಳು ಭಗವಹಿಸುವಂತೆ ಪ್ರೇರೇಪಿಸಲಾಗುತ್ತಿದೆ. ಸದೃಢ ದೇಹದಲ್ಲಿ ಸದೃಢ ಮನಸ್ಸು ಎಂಬಂತೆ ವಿದ್ಯಾರ್ಥಿಗಳನ್ನು ದೈಹಿಕವಾಗಿ ಸದೃಢರನ್ನಾಗಿ ಹಾಗೂ ಆರೋಗ್ಯವಂತರನ್ನಾಗಿ ಮಾಡಲು ವಿವಿಧ ಕ್ರೀಡಾ ಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗುತ್ತಿದೆ. ನಾಳಿನ ಭವಿಷ್ಯಕ್ಕೆ ಉತ್ತಮ ಪ್ರಜೆಗಳನ್ನು ನೀಡುವುದೇ ಶಾಲೆಯ ಉದ್ದೇಶವಾಗಿದೆ.